ಕುಂದಾಪುರ ತಾಲ್ಲೂಕಿನ ಬಿಡ್ಕಲ್ ಕಟ್ಟೆಯಲ್ಲಿರುವ ಪ್ರೌಢಶಾಲೆ ಶಿಕ್ಷಕರ ನೇಮಕಾತಿ ಬಗ್ಗೆ.

ಶ್ರೀ ಪ್ರತಾಪಚಂದ್ರಶೆಟ್ಟಿ (ಕುಂದಾಪುರ).— ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಕುಂದಾಪುರ ತಾಲ್ಲೂಕು ಬಿಡ್ಕಲ್ ಕಟ್ಟೆಯಲ್ಲಿರುವ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ?

ಆ) ಮಂಜೂರಾದ ಅಧ್ಯಾಪಕರ ಸಂಖ್ಯೆ ಎಷ್ಟು ? ಹಾಗೂ ಕೊರತೆ ಇರುವ ಅಧ್ಯಾಪಕರ ಸಂಖ್ಯೆ ಎಷ್ಟು ?

ಶ್ರೀ ಎಂ. ರಘುಪತಿ (ಶಿಕ್ಷಣ ಮಂತ್ರಿಗಳು).—

ಅ) ೨೮೬.

ಆ ಮಂಜೂರಾದ ಅಧ್ಯಾಪಕರ ಸಂಖ್ಯೆ ೮ ಖಾಲಿ ಹುದ್ದೆಗಳು ಇಲ್ಲ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಅಧ್ಯಾಪಕರ ನೇಮಕ.

೧೪೬೨. ಶ್ರೀ ಜಿ. ಎಸ್. ಆಚಾರ್ (ಬೈಂದೂರು).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರದ ಆಡಳಿತದಲ್ಲಿರುವ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ೧) ಪ್ರಾಥಮಿಕ ಶಾಲಾ ಅಧ್ಯಾಪಕರ ೨) ಪ್ರೌಢಶಾಲೆಯ ಅಧ್ಯಾಪಕರ ಹಾಗೂ ಮುಖ್ಯೋಪಾಧ್ಯಾಯರ ಕಿರಿಯ ಕಾಲೇಜಿನ ಉಪನ್ಯಾಸಕರ ಹಾಗೂ ಪ್ರಾಂಶುಪಾಲರ ಸಂಖ್ಯೆ ಎಷ್ಟು ?

ಆ) ಕಳೆದ ನವಂಬರ್ ತಿಂಗಳೊಳಗೆ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿಮಾಡಲಾಗುವುದೆಂದು ಸರಕಾರದವರು ಕಳೆದ ಅಧಿವೇಶನದಲ್ಲಿಯೇ ಭರವಸೆ ನೀಡಿದ್ದರೂ ಅದು ಕೈಗೊಂಡಿಲ್ಲದಿರುವುದಕ್ಕೆ ಕಾರಣವೇನು ?

ಇ) ಯಾವಾಗ ಭರ್ತಿ ಮಾಡಲಾಗುವುದು ?

ಶ್ರೀ ಎಂ. ರಘುಪತಿ (ಶಿಕ್ಷಣ ಮಂತ್ರಿಗಳು).—

ಅ) ಖಾಲಿ ಇರುವ ಹುದ್ದೆಗಳ ಬಗ್ಗೆ.

೧)	ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ.	ಇಲ್ಲ
೨)	ಪ್ರೌಢ ಶಾಲಾ ಅಧ್ಯಾಪಕರ ಸಂಖ್ಯೆ.	೧೪೫ ಹುದ್ದೆಗಳು
೩)	ಪ್ರೌಢ ಶಾಲಾ ಮುಖ್ಯೋಪಾಧ್ಯಾಯರು	೨೨ ಹುದ್ದೆಗಳು
೪)	ಕಿರಿಯ ಕಾಲೇಜಿನ ಉಪನ್ಯಾಸಕರು	೬೫ ಹುದ್ದೆಗಳು
೫)	ಪ್ರಾಂಶುಪಾಲರು	೧೧ ಹುದ್ದೆಗಳು

ಆ) ಖಾಲಿ ಇರುವ ಪ್ರೌಢಶಾಲಾ ಶಿಕ್ಷಕರ ಹುದ್ದೆಗಳನ್ನು ಈಗಾಗಲೇ ಗಂತ್ತಿಗೆ ಆಧಾರದ ಮೇಲೆ ಭರ್ತಿಮಾಡಲಾಗಿದೆ. ಈ ಹುದ್ದೆಗಳಿಗೆ ಖಾಯಂ ಆಗಿ ಭರ್ತಿ ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. ಉಪಾನ್ಯಾಸಕರ ಹುದ್ದೆಗಳಿಗೂ ಮತ್ತು ಪ್ರೌಢ ಶಾಲಾ ಮುಖ್ಯೋಪಾಧ್ಯಾಯರ ಹುದ್ದೆಗಳಿಗೂ ಬಡ್ತಿ ಕೊಡುವ ಬಗ್ಗೆ ಕೆಲವು ಮಾಹಿತಿಗಳು ಸಕಾಲದಲ್ಲಿ ಸಿಕ್ಕದಿದ್ದ ಕಾರಣ ಸ್ವಲ್ಪ ವಿಳಂಬವಾಯಿತು. ಆದರೆ ಈಗ ಭಡ್ತಿ ಕೊಡುವ ಬಗ್ಗೆ ಪರಿಶೀಲಿಸಲಾಗಿದ್ದು ಆದರ ಬಗ್ಗೆ ಇಲಾಖಾ ಸಮಿತಿಯು ತೀರ್ಮಾನ ತೆಗೆದುಕೊಂಡಿದೆ ಮತ್ತು ಲೋಕ ಸೇವಾ ಆಯೋಗಕ್ಕೆ ಒಪ್ಪಿಗೆಗೆ ಕಳುಹಿಸಲಾಗಿದೆ.

ಇ) ಆದಷ್ಟು ಶೀಘ್ರವಾಗಿ.